ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನ ಸಭೆ

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE : 16/9/201

# ಶಾಸಕರ ಖಾತೆಗೆ ವೇತನ

ಸಂ.ಕ 16-9-17

ಬೆಂಗಳೂರು: ಶಾಸಕರ ವೇತನ ಹಾಗೂ ಭತ್ಯೆಯನ್ನು ಇನ್ನುಮುಂದೆ ನೇರವಾಗಿ ಬ್ಯಾಂಕ್ ಖಾತೆಗೆ ವರ್ಗಾವಣೆ ಮಾಡಲು ಸರ್ಕಾರ ಉದ್ದೇಶಿಸಿದೆ.

ಇದುವರೆಗೆ ಶಾಸಕರ ವೇತನ ಹಾಗೂ ಭತ್ಯೆಯನ್ನು ಧನಾದೇಶದ ಮೂಲಕ ವಿತರಿಸಿ ಅದನ್ನು ಬ್ಯಾಂಕ್ ಖಾತೆಗಳಿಗೆ ವರ್ಗಾವಣೆ ಮಾಡಲಾಗುತ್ತಿತ್ತು. ಸೆ.20 ರಿಂದ ನೇರವಾಗಿ ಬ್ಯಾಂಕ್ ಖಾತೆಗೆ ವರ್ಗಾವಣೆ ಮಾಡಲಾಗುತ್ತದೆ.

ಎಲ್ಲಾ ವ್ಯವಹಾರಗಳನ್ನು ಖಜಾನೆ-2 ಮೂಲಕ ನಿರ್ವಹಿಸಲು ಆರ್ಥಿಕ ಇಲಾಖೆ ಸೂಚನೆ ನೀಡಿರುವ ಹಿನ್ನೆಲೆಯಲ್ಲಿ ಸೆ. 20ರ ನಂತರ ಧನಾದೇಶದ ಮೂಲಕ ಪಾವತಿ ಮಾಡುವ ವ್ಯವಸ್ಥೆಯನ್ನು ರದ್ದುಪಡಿಸುವುದಾಗಿ ಆರ್ಥಿಕ ಇಲಾಖೆ ತಿಳಿಸಿರುವ ಹಿನ್ನೆಲೆಯಲ್ಲಿ ವಿಧಾನಸಭೆ ಸಚಿವಾಲಯ ಎಲ್ಲಾ ಶಾಸಕರ ವೇತನ ಮತ್ತು ಭತ್ಯೆಯನ್ನು ನೇರವಾಗಿ ಬ್ಯಾಂಕ್ ಖಾತೆಗೆ ವರ್ಗಾವಣೆಯಾಗಲು ಅನುಕೂಲವಾಗುವಂತೆ ಶಾಸಕರಿಂದ ಬ್ಯಾಂಕ್ ಖಾತೆ ವಿವರಗಳನ್ನು ಪಡೆದುಕೊಳ್ಳುತ್ತಿದೆ. ಈ ಸಂಬಂಧ ವಿಧಾನಸಭೆ ಸಚಿವಾಲಯವು ಶಾಸಕರಿಗೆ ಮಾಹಿತಿಯನ್ನು ಒದಗಿಸಲಾಗಿದೆ.

ಈ ನೂತನ ವ್ಯವಸ್ಥೆ ಜಾರಿಗೆ ಬಂದ ನಂತರ ಶಾಸಕರಿಗೂ ವೇತನ ಮತ್ತು ಭತ್ಯೆ ಅವರವರ ಬ್ಯಾಂಕ್ ಖಾತೆಗಳಿಗೆ ವರ್ಗಾವಣೆಯಾಗಲಿದೆ.